# ದಿನಾಂಕ: 28-08-2010ರಂದು ಅಪರಾಹ್ನ: 03-00ಗಂಟೆಗೆ ಹೇಮಾವತಿ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

ಅಧ್ಯಕ್ಷತೆ: ಶ್ರೀಮತಿ ಕಾಮಾಕ್ಷಿರಾಜು

ಅಧ್ಯಕ್ಷರು,

ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ

ಹಾಜರಿ:06

ಗೈರು ಹಾಜರಿ: 01

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ. ಇವರು ಸಭೆಗೆ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು, ಮುಖ್ಯ ಲೆಕ್ಕಾಧಿಕಾರಿ, ಮುಖ್ಯ ಯೋಜನಾಧಿಕಾರಿ, ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಯವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಮಾನ್ಯ ಸಮಿತಿ ಅಧ್ಯಕ್ಷರನ್ನು ಕೋರಿದರು. | |
| 1 | ಮೇ 2010 ಜೂನ್ 2010ರ ಮಾಹೆಯ ಮಾಸಿಕ ಲೆಕ್ಕ ಅನುಮೋದನೆಗೆ | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆರ್ಥಿಕ/ ಸಂಕಲನ/ ಮಾಸಿಕ ಲೆಕ್ಕ-2/2010-11 ದಿನಾಂಕ: 25-08-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br><br>ಮುಖ್ಯ ಲೆಕ್ಕಾಧಿಕಾರಿಯವರು ಪ್ರಸ್ತಾಪಿಸುತ್ತಾ, ಜಿಲ್ಲಾ ಪಂಚಾಯಿತಿ ಹಾಸನದ ಮೇ 2010 ಮತ್ತು ಜೂನ್ 2010ರ ಮಾಹೆಯ ಜಮಾ ಮತ್ತು ಖರ್ಚಿನ ತ:ಖ್ತೆಗಳು ಚಲನ್ ಮತ್ತು ಓಚರ್‌ಗಳು ಸ್ವೀಕೃತವಾಗಿರುತ್ತದೆ. ಖಜಾನೆಯಿಂದ ಸ್ವೀಕೃತವಾದ ಒಟ್ಟು ಜಮೆ ಮತ್ತು ಖರ್ಚಿನ ವಿವರಗಳನ್ನು ಪ್ರಧಾನ ಲೆಕ್ಕ ಶೀರ್ಷಿಕೆವಾರು ಸಂಕಲನ ಗಣಕೀಕರಣದಲ್ಲಿ ತಯಾರಿಸಲಾಗಿದೆ. ಸದರಿ ಸಂಕಲನದ ತ:ಖ್ತೆಯ ವಿವರ ರಾಜಸ್ವ ಜಮೆ ವೆಚ್ಚ ಮತ್ತು ಜಮಾ ಶೀರ್ಷಿಕೆಗಳ ಲೆಕ್ಕ, ಜಿಲ್ಲಾ ಪಂಚಾಯಿತಿಯ ಒಟ್ಟು ಜಮಾ ಮತ್ತು ಖರ್ಚಿನ ವಿವರ ಕೆಳಗಿನಂತಿದೆ. ಮೇ 2010 ಮತ್ತು | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br><br>ಮುಖ್ಯ ಲೆಕ್ಕಾಧಿಕಾರಿಯವರು ಕೋರಿರುವಂತೆ ಜಿಲ್ಲಾ ಪಂಚಾಯಿತಿ ಹಾಸನದ ಮೇ 2010 ಮತ್ತು ಜೂನ್ 2010ರ ಮಾಹೆಯ ಜಮಾ ಮತ್ತು ಖರ್ಚಿನ ತ:ಖ್ತೆ ರಾಜಸ್ವ ಜಮೆ ವೆಚ್ಚ ಮತ್ತು ಜಮಾ ಶೀರ್ಷಿಕೆಗಳ ಲೆಕ್ಕ, ಜಿಲ್ಲಾ ಪಂಚಾಯಿತಿಯ ಒಟ್ಟು ಜಮಾ ಮತ್ತು ಖರ್ಚಿನ ವಿವರಗಳಿಗೆ ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು. |

<table>
<tr>
<td></td>
<td></td>
<td>ಜೂನ್ 2010ರ ಮಾಸಿಕ ಲೆಕ್ಕ ವಿವರ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಅನುಮೋದನೆ ನೀಡಲು ಮಂಡಿಸಿದೆ..
<table>
<tr><th>ವಿವರ</th><th>ಮೇ 2010</th><th>ಜೂನ್ 2010</th></tr>
<tr><td>ಜಮೆ</td><td>70469215</td><td>107517325</td></tr>
<tr><td>ಖರ್ಚು</td><td>87381625</td><td>96808496</td></tr>
</table>
</td>
<td>
<table>
<tr><th>ವಿವರ</th><th>ಮೇ 2010</th><th>ಜೂನ್ 2010</th></tr>
<tr><td>ಜಮೆ</td><td>70469215</td><td>107517325</td></tr>
<tr><td>ಖರ್ಚು</td><td>87381625</td><td>9680 49</td></tr>
</table>
</td>
</tr>
<tr>
<td>2</td>
<td>2009-10ನೇ ಸಾಲಿನ ವಾರ್ಷಿಕ ಲೆಕ್ಕವನ್ನು ಹಣಕಾಸು ಆಡಿಟ್ ಮತ್ತು ಯೋಜನಾ ಸ್ಥಾಯಿ ಸಮಿತಿಯ ಅನುಮೋದನೆಗಾಗಿ ಮಂಡಿಸುವ ವಿಚಾರ</td>
<td>ಟಿಪ್ಪಣಿ ಸಂಖ್ಯೆ: ಜಿಪಂಹಾ/ಆರ್ಥಿಕ (ಸಂ) ವಾರ್ಷಿಕ ಲೆಕ್ಕ/3/2010-11 ದಿ: 26-08-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಇವರು ಜಿಲ್ಲಾ ಪಂಚಾಯಿತಿ ಹಾಸನದ 2009-10ನೇ ಸಾಲಿನ ಜಿಲ್ಲಾ ಪಂಚಾಯಿತಿ ವಾರ್ಷಿಕ ಲೆಕ್ಕಪತ್ರವನ್ನು ಹಣಕಾಸು ಮತ್ತು ಲೆಕ್ಕಪರಿಶೋಧನೆ ಹಾಗೂ ಯೋಜನಾ ಸ್ಥಾಯಿ ಸಮಿತಿಯ ಅನುಮೋದನೆಗೆ ಕೋರಿ ಜಮಾ ಮತ್ತು ಖರ್ಚು ತ:ಖ್ತೆಯನ್ನು ಸಿದ್ಧಪಡಿಸಿ ಸಲ್ಲಿಸಿರುತ್ತಾರೆ.
<table>
<tr><td>ಜಮೆ</td><td>1610114426</td></tr>
<tr><td>ಖರ್ಚು</td><td>1494924427</td></tr>
</table>
</td>
<td>ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಇವರು ಸಿದ್ದಪಡಿಸಿ ಸಲ್ಲಿಸಿರುವ 2009-10ನೇ ಸಾಲಿನ ಜಿಲ್ಲಾ ಪಂಚಾಯಿತಿ ವಾರ್ಷಿಕ ಲೆಕ್ಕಪತ್ರದ ಜಮಾ ಮತ್ತು ಖರ್ಚಿನ ತ:ಖ್ತೆಗೆ ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು.
<table>
<tr><td>ಜಮೆ</td><td>1610114426</td></tr>
<tr><td>ಖರ್ಚು</td><td>1494924427</td></tr>
</table>
</td>
</tr>
<tr>
<td></td>
<td></td>
<td>ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಸಕಲೇಶಪುರ ತಾಲ್ಲೂಕು ಹಾನುಬಾಳು ಗ್ರಾಮದಲ್ಲಿರುವ ಸರ್ಕಾರಿ ಶಾಲೆಯಲ್ಲಿ ಸುಮಾರು 225 ಮಕ್ಕಳಿದ್ದಾರೆ. ಆದರೆ, ಯಾವುದೆ ಅಡುಗೆ ಮನೆ ಇರುವುದಿಲ್ಲ. ಆದ್ದರಿಂದ, ಅಡುಗೆ ಮನೆ ನಿರ್ಮಾಣಕ್ಕೆ ಅನುದಾನವನ್ನು ಬಿಡುಗಡೆ ಮಾಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಪ್ರೇಮಾ ನಿಂಗಪ್ಪರವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನದ ಬಗ್ಗೆ ವಿವರಗಳನ್ನು ನೀಡಬೇಕೆಂದು ಕೋರಿದರು.</td>
<td>ಮಾನ್ಯ ಸದಸ್ಯರುಗಳು ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಲಾಯಿತು.</td>
</tr>
</table>

| | | | |
|---|---|---|---|
| | | ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರು ಉತ್ತರಿಸುತ್ತಾ, ಐಎಂಐಎಸ್ ನಲ್ಲಿ ಅಳವಡಿಸಿರುವ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಅನುದಾನವನ್ನು ಬಿಡುಗಡೆ ಮಾಡಿರುತ್ತಾರೆ. ಸದರಿ ಕಾಮಗಾರಿಗಳಲ್ಲಿ ರೂ.2.00ಲಕ್ಷಗಳವರೆಗಿನ ಕಾಮಗಾರಿಗಳನ್ನು ಸೇರಿಸದೆ ತುಂಡು ಗುತ್ತಿಗೆ ಆಧಾರದ ಮೇಲೆ ಅನುಷ್ಠಾನ ಮಾಡಲು ಅವಕಾಶ ಮಾಡಲಾಗಿದೆ. ಅಲ್ಲದೆ, ಅಗತ್ಯವಿದ್ದಲ್ಲಿ ಮಾನ್ಯ ಸದಸ್ಯರುಗಳು ತುಂಬಾ ಅವಶ್ಯವಿರುವ ಕುಡಿಯುವ ನೀರಿನ ಕಾಮಗಾರಿಗಳ ಪಟ್ಟಿಯನ್ನು ನೀಡಿದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಕೇಂದ್ರ ಸರ್ಕಾರದಿಂದ ನಿರ್ದೇಶನವಿದ್ದು, ಅದರಂತೆ ಕ್ರಮ ವಹಿಸುವುದಾಗಿ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳಿಗೆ ಕಟ್ಟಡಗಳ ಕೊರತೆಯಿದ್ದು, ಈ ಬಗ್ಗೆ ಏನು ಕ್ರಮ ವಹಿಸಲಾಗಿದೆ ಎಂಬ ಬಗ್ಗೆ ವಿವರ ನೀಡುವಂತೆ ಕೋರಿದರು.<br>ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಇವರು ಉತ್ತರಿಸುತ್ತಾ, 914 ಅಂಗನವಾಡಿ ಕೇಂದ್ರಗಳಿಗೆ ಹೊಸ ಕಟ್ಟಡ ನಿರ್ಮಾಣಕ್ಕೆ ಈಗಾಗಲೇ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಅಲ್ಲದೆ, 281 ಅಂಗನವಾಡಿ ಕೇಂದ್ರಗಳ ಕಟ್ಟಡಗಳು ತುಂಬಾ ಶಿಥಿಲಾವಸ್ಥೆಯಲ್ಲಿದ್ದು, ಅವುಗಳನ್ನು ದುರಸ್ಥಿಪಡಿಸುವ ಬಗ್ಗೆ ಅವಶ್ಯ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಅಣ್ಣಪ್ಪಶೆಟ್ಟಿರವರು ಮಾತನಾಡುತ್ತಾ, ಹಾಲುವಾಗಿಲು ಗ್ರಾಮದಲ್ಲಿ ನಿರ್ಮಿಸುತ್ತಿರುವ ಅಂಗನವಾಡಿ ಕೇಂದ್ರದ ಕಟ್ಟಡ ಕಾಮಗಾರಿಯು ಪೂರ್ಣಗೊಂಡಿರುವುದಿಲ್ಲ. ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ಕೋರಿದರು. ಮತ್ತು ಅಂಗನವಾಡಿ ಕೇಂದ್ರದ ಮಕ್ಕಳಿಗೆ ಈಗ ನೀಡುತ್ತಿರುವ ಆಹಾರ ಪದಾರ್ಥವು ಚೆನ್ನಾಗಿರುವುದಿಲ್ಲ. ಅದನ್ನು ಮಕ್ಕಳು ತಿನ್ನುತ್ತಿಲ್ಲವೆಂದು ತಿಳಿಸಿದರು.<br>ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರು ಉತ್ತರಿಸುತ್ತಾ, ಈ ಬಗ್ಗೆ ರಾಜ್ಯ ಮಟ್ಟದ ಸಭೆಗಳಲ್ಲಿ ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗಿದ್ದು, ಈಗ | |

ನೀಡುತ್ತಿರುವ ಆಹಾರ ಪದಾರ್ಥವನ್ನು ಬದಲಾವಣೆ ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ ಎಂದು ತಿಳಿಸಿರುತ್ತಾರೆಂದು ಸಭೆಗೆ ವಿವರ ನೀಡಿದರು.

ಯೋಜನಾ ನಿರ್ದೇಶಕರು ಮಾತನಾಡುತ್ತಾ, 2009-10ನೇ ಸಾಲಿನಲ್ಲಿ ಇಲಾಖೆಗಳಿಗೆ ಬಿಡುಗಡೆಯಾದ ಅನುದಾನವನ್ನು ವ್ಯಪಗತ ಮಾಡಿದ್ದಲ್ಲಿ ವಿವರ ನೀಡಬೇಕೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಅಡುಗೆ ಮನೆ ನಿರ್ಮಾಣಕ್ಕೆ ಬಿಡುಗಡೆಯಾಗಿರುವ ಅನುದಾನದಲ್ಲಿ ಸುಮಾರು 31 ಶಾಲೆಗಳಲ್ಲಿ ಅಡುಗೆ ಮನೆ ನಿರ್ಮಾಣಕ್ಕೆ ಅನುದಾನ ಬೇಡವೆಂದು ವಾಪಸ್ಸು ನೀಡಿರುತ್ತಾರೆ. ಆದ್ದರಿಂದ, ಸದರಿ ಅನುದಾನವನ್ನು ಅಡುಗೆ ಮನೆ ಅವಶ್ಯವಿರುವ ಶಾಲೆಗಳಿಗೆ ಬಿಡುಗಡೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಅಕ್ಷರ ದಾಸೋಹ ಯೋಜನೆಯಡಿಯಲ್ಲಿ ಯಾವ ಯಾವ ಶಾಲೆಗಳಿಗೆ ಅಡುಗೆ ಮನೆ ನಿರ್ಮಾಣಕ್ಕೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂಬ ಬಗ್ಗೆ ವಿವರಗಳನ್ನು ನೀಡಬೇಕೆಂದು ಕೋರಿದರು.

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳು/ ಆಶ್ರಮಶಾಲೆ ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ನಿರ್ವಹಣೆಯನ್ನು ಮತ್ತು ಮಕ್ಕಳಿಗೆ ನೀಡುವ ಆಹಾರದ ಗುಣಮಟ್ಟವನ್ನು ಉತ್ತಮಪಡಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.

ಮಾನ್ಯ ಉಪಾಧ್ಯಕ್ಷರು ಮಾತನಾಡುತ್ತಾ, ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳಿಗೆ ಮಲಗಲು ಅನುಕೂಲವಾಗುವಂತೆ ಕಾಟ್ ಗಳನ್ನು ಸರಬರಾಜು ಮಾಡಲು ಕ್ರಮ ವಹಿಸಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು.

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಪರಿಶಿಷ್ಟ ಜಾತಿ/ವರ್ಗಗಳ ಕಾಲೋನಿಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸಲು ಮಾನ್ಯ ಶಾಸಕರುಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ಮತ್ತು ಯಾವ ಯಾವ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ ಎಂಬ ಬಗ್ಗೆ ವಿವರಗಳನ್ನು ಒದಗಿಸುವಂತೆ ಕೋರಿದರು.<br>ಮುಂದುವರೆದು, ಹಿಂದುಳಿದ ವರ್ಗಗಳ ಇಲಾಖೆಯಿಂದ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಂಡಿರುವ ಸಿಬ್ಬಂದಿಯವರಿಗೆ ಸಮರ್ಪಕವಾಗಿ ವೇತನ ಪಾವತಿಸಿರುವುದಿಲ್ಲ ಮತ್ತು ಪಿ.ಎಫ್ ಕೂಡಾ ಕಡಿತ ಮಾಡಿ ಸಿಬ್ಬಂದಿಯವರಿಗೆ ನೀಡಿರುವುದಿಲ್ಲ. ಆದ್ದರಿಂದ, ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಗ್ಯಾಸ್ ಕನೆಕ್ಷನ್ ಪಡೆಯಬೇಕೆಂದು ಕೋರಿದರು.<br>ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಉತ್ತರಿಸುತ್ತಾ, ಪರಿಶಿಷ್ಟ ಜಾತಿ/ವರ್ಗಗಳ ಕಾಲೋನಿಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸಲು ಮಾನ್ಯ ಶಾಸಕರುಗಳಿಗೆ ರೂ.25.00ಲಕ್ಷಗಳನ್ನು ಬಿಡುಗಡೆ ಮಾಡಿದ್ದು, ಸದರಿ ಅನುದಾನದಲ್ಲಿ ರಸ್ತೆ, ಚರಂಡಿ ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನ ಮಾಡಬೇಕಾಗಿರುತ್ತದೆ ಎಂದು ವಿವರ ನೀಡಿದರು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಉತ್ತರಿಸುತ್ತಾ, ಹೊರ ಗುತ್ತಿಗೆ ಸಂಸ್ಥೆಯವರು ಸಿಬ್ಬಂದಿಯವರ ವೇತನದಲ್ಲಿ ಪಿ.ಎಫ್ ಹಣವನ್ನು ಕಡಿತ ಮಾಡಿರುತ್ತಾರೆ. ಈ ಬಗ್ಗೆ ಓಚರ್ ನೀಡಿರುತ್ತಾರೆಂದು ವಿವರ ನೀಡಿದರು ಮತ್ತು ಗ್ಯಾಸ್ ಕನೆಕ್ಷನ್ ಪಡೆಯಲು ಈಗಾಗಲೇ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ವಿವರ ನೀಡಿದರು.<br>ಉಪ ನಿರ್ದೇಶಕರು , ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಇವರು ಮಾತನಾಡುತ್ತಾ, ನಬಾರ್ಡ್ ಅಂಗನವಾಡಿ ಕೇಂದ್ರಗಳ ಕಟ್ಟಡ ನಿರ್ಮಾಣ ಯೋಜನೆಯಡಿಯಲ್ಲಿ ರೂ.7.46ಲಕ್ಷಗಳ ಅನುದಾನ ವ್ಯಪಗತವಾಗಿದ್ದು, ಇದನ್ನು ನವೀಕರಿಸಿಕೊಡುವಂತೆ ಜಿಲ್ಲಾ ಪಂಚಾಯಿತಿ ಮೂಲಕ ಈಗಾಗಲೇ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು. | |

| | | |
|---|---|---|
| | ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಕೃಷಿ ಇಲಾಖೆಯಲ್ಲಿ ಆಮದು ಮಾಡಿಕೊಂಡಿರುವ ರಸಗೊಬ್ಬರದ ಚೀಲದ ಮೇಲೆ ರೂ.323.40 ಪೈಸೆ ದರವನ್ನು ನಮೂದಿಸಿದ್ದು, ಮಾರಾಟಗಾರರು ರೂ.328.00ಗಳಿಗೆ ಮಾರಾಟ ಮಾಡುತ್ತಿದ್ದಾರೆ. ಆದ್ದರಿಂದ, ಈ ಬಗ್ಗೆ ಪರಿಶೀಲಿಸಿ ರಸಗೊಬ್ಬರದ ಚೀಲದ ಮೇಲೆ ನಮೂದಿಸಿರುವ ದರದಲ್ಲಿಯೇ ರಸಗೊಬ್ಬರವನ್ನು ಮಾರಾಟ ಮಾಡುವಂತೆ ನಿರ್ದೇಶನ ನೀಡಬೇಕೆಂದು ಕೋರಿದರು ಮತ್ತು ಮಲೆನಾಡು ಪ್ರದೇಶಗಳಿಗೆ ಹೆಚ್ಚು ಯೂರಿಯಾ ರಸಗೊಬ್ಬರದ ಅವಶ್ಯಕತೆಯಿದ್ದು, ಸರಬರಾಜು ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br><br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಮೀನುಗಾರಿಕೆ ಇಲಾಖೆಯಡಿ ಯಗಚಿ ಡ್ಯಾಂನಲ್ಲಿ ಸ್ಥಳೀಯ ಮೀನುಗಾರರಿಗೆ ಪರವಾನಿಗೆಯನ್ನು ನೀಡುವ ಬಗ್ಗೆ ಏನು ಕ್ರಮ ವಹಿಸಲಾಗಿದೆ ಎಂಬ ಬಗ್ಗೆ ವಿವರಗಳನ್ನು ನೀಡುವಂತೆ ಹಾಗೂ ಯಗಚಿ ಡ್ಯಾಂಗೆ ಬೇರೆಯವರು ಮೀನುಮರಿಗಳನ್ನು ಬಿಟ್ಟಿರುವುದು ಕಂಡುಬಂದಿರುತ್ತದೆ. ಈ ಬಗ್ಗೆ ವಿವರ ನೀಡಬೇಕೆಂದು ಹಿರಿಯ ಮೀನುಗಾರಿಕಾ ಸಹಾಯಕ ನಿರ್ದೇಶಕರಿಗೆ ತಿಳಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಅಣ್ಣಪ್ಪಶೆಟ್ಟಿರವರು ಮಾತನಾಡುತ್ತಾ, ಹಾಸನ ತಾಲ್ಲೂಕಿನ ಸಹಾಯಕ ನಿರ್ದೇಶಕರು ಇಲಾಖೆಯಡಿ ಬೆಳೆಸಿರುವ ಮೀನುಮರಿಗಳನ್ನು ಅವರ ಮಗನ ಹೆಸರಿನಲ್ಲಿ ಮಾರಾಟ ಮಾಡುತ್ತಿದ್ದಾರೆ ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ಕೋರಿದರು.<br><br>ಹಿರಿಯ ಮೀನುಗಾರಿಕಾ ಸಹಾಯಕ ನಿರ್ದೇಶಕರು ಉತ್ತರಿಸುತ್ತಾ, ಯಗಚಿ ಡ್ಯಾಂನಲ್ಲಿ ಸ್ಥಳೀಯರಿಗೆ ಪರವಾನಿಗೆಯನ್ನು ನೀಡುವ ಬಗ್ಗೆ ಸಾಮಾನ್ಯ ಸಭೆಯಲ್ಲಿ ತೀರ್ಮಾನಿಸಿರುವಂತೆ ಈಗಾಗಲೇ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ವಿವರ ನೀಡಿದರು ಮತ್ತು ಹಾಸನ ತಾಲ್ಲೂಕಿನ ಸಹಾಯಕ ನಿರ್ದೇಶಕರ ಬಗ್ಗೆ ಈಗಾಗಲೇ ಕೇಂದ್ರ ಕಛೇರಿಯ ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗಿದೆ ಎಂದು ವಿವರ ನೀಡಿದರು.<br><br>ಕಾರ್ಯಪಾಲಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರು ಮಾತನಾಡುತ್ತಾ, 5054 ಗ್ರಾಮೀಣ ರಸ್ತೆ ಮತ್ತು ಸೇತುವೆ ಯೋಜನೆಯಡಿಯಲ್ಲಿ | |

| | | | |
|---|---|---|---|
| | | ರೂ.115.32ಲಕ್ಷಗಳ ಅನುದಾನ ವ್ಯಪಗತವಾಗಿದ್ದು, ನವೀಕರಿಸಿಕೊಡುವಂತೆ ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ವಿವರ ನೀಡಿದರು.<br>ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕೇಂದ್ರಗಳು, ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ವಿದ್ಯಾರ್ಥಿನಿಲಯ/ಆಶ್ರಮಶಾಲೆ ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೂ ಸಹ ಜಲಮಣಿ ಯೋಜನೆಯಡಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸುವ ಬಗ್ಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಸಭೆಯು ತೀರ್ಮಾನಿಸಿತು.<br>ಮಾನ್ಯ ಜಿಲ್ಲಾ ಪಂಚಾಯಿತಿ ಉಪಾಧ್ಯಕ್ಷರು ಮಾತನಾಡುತ್ತಾ, ಕಾಮದೇನು ವೃದ್ಧಾಶ್ರಮದಲ್ಲಿ ಸುಮಾರು ಪುಟ್ಟ ಮಕ್ಕಳುಗಳ ಪೋಷಣೆ ಮಾಡುತ್ತಿದ್ದು, ಅಲ್ಲಿಗೆ ಚಾಪೆ, ಹಾಸಿಗೆ ಮತ್ತು ಹೊದಿಕೆಗಳ ಅವಶ್ಯಕತೆಯಿದ್ದು, ಖರೀದಿಸಲು ಅವಶ್ಯ ಅನುದಾನವನ್ನು ಬಿಡುಗಡೆ ಮಾಡುವುದು ಅವಶ್ಯಕವೆಂದು ತಿಳಿಸಿದರು.<br>ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಇವರು ಕಾಮದೇನು ವೃದ್ಧಾಶ್ರಮದಿಂದ ಚಾಪೆ, ಹಾಸಿಗೆ ಮತ್ತು ಹೊದಿಕೆಗಳ ಖರೀದಿಗೆ ಎಷ್ಟು ಅನುದಾನದ ಅವಶ್ಯಕತೆ ಇದೆ ಎಂಬ ಬಗ್ಗೆ ಮನವಿಯನ್ನು ಪಡೆದು ನಂತರ ಕ್ರಮ ವಹಿಸಬಹುದಾಗಿರುತ್ತದೆ ಎಂದು ಸಲಹೆ ನೀಡಿದರು. | |
| 3 | ಜಿಲ್ಲಾ ಪಂಚಾಯತ್ ಹಾಸನ ಕ್ಕೆ 2010-11ನೇ ಸಾಲಿನಲ್ಲಿ ಜುಲೈ ಮತ್ತು ಆಗಸ್ಟ್ ತಿಂಗಳ ಅಂತ್ಯದವರೆಗೆ ಆರ್ಥಿಕ ಇಲಾಖೆ/ ಗ್ರಾಮೀಣಾಭಿವೃದ್ಧಿ ಇಲಾಖೆ ಹಾಗೂ ಇತರೆ ಅನುದಾನಗಳ ಜಮೆ ವಿವರ | ಟಿಪ್ಪಣಿ ಸಂಖ್ಯೆ: ಜಿಪಂಹಾ/ಅವ್ಯ: ಅಧೀ:1/4/ ಹಸ: ಟಿಪ್ಪಣಿ: /2010-11 ದಿನಾಂಕ: 27-08-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮುಖ್ಯ ಲೆಕ್ಕಾಧಿಕಾರಿಯವರು ಜಿಲ್ಲಾ ಪಂಚಾಯತ್ ಹಾಸನಕ್ಕೆ ಜುಲೈ ಮತ್ತು ಆಗಸ್ಟ್ ಮಾಹೆಗಳಲ್ಲಿ ಆರ್ಥಿಕ ಇಲಾಖೆಯಿಂದ ಲಿಂಕ್ ಡಾಕ್ಯುಮೆಂಟ್ ಅನುದಾನ/ ಇಲಾಖೆ ಅನುದಾನ/ ಹೆಚ್ಚುವರಿ ಅನುದಾನ/ ಕೇಂದ್ರ ಪುರಸ್ಕೃತ ಅನುದಾನಗಳು/ ರಸ್ತೆ ಅಭಿವೃದ್ಧಿ ಅನುದಾನ ಹಾಗೂ ಇತರೆ ಅನುದಾನಗಳು ಬಿಡುಗಡೆಯಾಗಿರುವ ಬಗ್ಗೆ ಸಭೆಯ ಅವಗಾಹನೆಗೆ ಸಲ್ಲಿಸಿದರು. | ಸಭೆಯು ಜಿಲ್ಲಾ ಪಂಚಾಯತ್ ಹಾಸನಕ್ಕೆ ಆರ್ಥಿಕ ಇಲಾಖೆಯಿಂದ ಲಿಂಕ್ ಡಾಕ್ಯುಮೆಂಟ್ ಅನುದಾನ/ ಇಲಾಖೆ ಅನುದಾನ/ ಹೆಚ್ಚುವರಿ ಅನುದಾನ/ ಕೇಂದ್ರ ಪುರಸ್ಕೃತ ಅನುದಾನಗಳು/ ರಸ್ತೆ ಅಭಿವೃದ್ಧಿ ಅನುದಾನ ಹಾಗೂ ಇತರೆ ಅನುದಾನಗಳು ಬಿಡುಗಡೆಯಾಗಿರುವ ಬಗ್ಗೆ ಸಭೆಯ ಅವಗಾಹಿಸಿತು. |

| ಕ್ರ | ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು | | |
|---|---|---|---|
| 1 | ಹಾಸನ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಕ್ರೀಡಾ ಕೂಟಕ್ಕೆ ವಿಶೇಷ ಅನುದಾನ ಕೋರುವ ಬಗ್ಗೆ. | ಪ್ರಾಂಶುಪಾಲರು, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ದಿನಾಂಕ: 08-09-2010 ಹಾಗೂ 09-09-2010ರಂದು ಜಿಲ್ಲಾ ಕ್ರೀಡಾಂಗಣ, ಹಾಸನ ಇಲ್ಲಿ ಆಯೋಜಿಸಲಾಗಿದ್ದು, ಈ ಕ್ರೀಡಾಕೂಟಕ್ಕೆ ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ಕಡಿಮೆ ಅನುದಾನ ಬಂದಿರುತ್ತದೆ. ಈ ಅನುದಾನ ಕ್ರೀಡಾಕೂಟ ನಡೆಸಲು ಸಾಧ್ಯವಾಗದಿರುವುದರಿಂದ ಜಿಲ್ಲಾ ಪಂಚಾಯಿತಿ ವತಿಯಿಂದ ಧನಸಹಾಯ ನೀಡಬೇಕೆಂದು ಕೋರಿರುತ್ತಾರೆ. ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಮನವಿಯನ್ನು ಸಭೆಯಲ್ಲಿ ಮಂಡಿಸುವಂತೆ ತಿಳಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ಚರ್ಚಿಸಲಾಗಿ, ದಿನಾಂಕ: 08-09-2010 ಹಾಗೂ 09-09-2010ರಂದು ಜಿಲ್ಲಾ ಕ್ರೀಡಾಂಗಣ, ಹಾಸನ ಇಲ್ಲಿ ನಡೆಯುವ ಬಾಲಕಿಯರ ಪದವಿ ಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 2 | ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟಕ್ಕೆ ಧನ ಸಹಾಯ ನೀಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮನವಿಯನ್ನು ಸಲ್ಲಿಸಿ ಶಂಭುಲಿಂಗೇಶ್ವರ ಪದವಿ ಪೂರ್ವ ಕಾಲೇಜು, ಗಂಡಸಿ, ಅರಸೀಕೆರೆ ತಾಲ್ಲೂಕು ಇಲ್ಲಿ ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳು ಕ್ರೀಡಾಕೂಟ ನಡೆಯುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಪಟುಗಳು ಭಾಗವಹಿಸುತ್ತಿದ್ದಾರೆ. ಕ್ರೀಡಾಕೂಟಕ್ಕೆ ಇರುವ ಅನುದಾನವು ಸಾಕಾಗದೆ ಇರುವುದರಿಂದ, ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/-ಗಳ ಅನುದಾನವನ್ನು ನೀಡುವಂತೆ ಕೋರಿರುತ್ತಾರೆ. ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ವಿಷಯವನ್ನು ಸಭೆಯಲ್ಲಿ ಮಂಡಿಸುವಂತೆ ತಿಳಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರಾಗಿ ಚರ್ಚಿಸಲಾಯಿತು.<br>ಶಂಭುಲಿಂಗೇಶ್ವರ ಪದವಿ ಪೂರ್ವ ಕಾಲೇಜು, ಗಂಡಸಿ, ಅರಸೀಕೆರೆ ತಾಲ್ಲೂಕು ಇಲ್ಲಿ ನಡೆಯುವ ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳು ಕ್ರೀಡಾಕೂಟಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಸಹಾಯಧನವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. ಮತ್ತು ಹೇಮಾವತಿ ಪ್ರೌಢಶಾಲೆ, ಮಾನಸ ವಿದ್ಯಾಸಂಸ್ಥೆ, ಗೊರೂರು, ಹಾಸನ ತಾಲ್ಲೂಕು ಇವರು ದಿನಾಂಕ: 03-08-2010ರಿಂದ 04-08-2010ರವರೆಗೆ ಹಾಸನ ನಗರದ ಕ್ರೀಡಾಂಗಣದಲ್ಲಿ ನಡೆಸಿರುವ 2010ನೇ ಸಾಲಿನ ದಕ್ಷಿಣ ವಲಯದ ಕ್ರೀಡಾಕೂಟಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಸಹಾಯಧನವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

| | | | |
|---|---|---|---|
| 3 | ಹೊಸ ವಾಹನ ಒದಗಿಸುವ ಕುರಿತು. | ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರು ಹಾಲಿ ಇರುವ ವಾಹನವು ತುಂಬಾ ಹಳೆಯದಾಗಿ ಅನುಪಯುಕ್ತ ಸ್ಥಿತಿಯಲ್ಲಿದ್ದು, ದುರಸ್ಥಿಪಡಿಸಲು ಸಾಧ್ಯವಿರುವುದಿಲ್ಲ. ಆದ್ದರಿಂದ ಹೊಸ ವಾಹನವನ್ನು ಖರೀದಿಸಲು ಒಟ್ಟಾರೆ ಉಳಿತಾಯವಾಗಿರುವ ಅನುದಾನದಲ್ಲಿ ಖರೀದಿಸಲು ಅನುಮತಿ ನೀಡಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇಲ್ಲಿಗೆ ಕಛೇರಿ ಉಪಯೋಗಕ್ಕಾಗಿ ಹೊಸದಾಗಿ ಎರಡು ಅಂಬಾಸಿಡರ್ ಕಾರುಗಳನ್ನು ನಿಯಮಾನುಸಾರ ಖರೀದಿಸಲು ಸಭೆಯು ಸರ್ವಾನುಮತದಿಂದ ಅನುಮತಿ ನೀಡಿತು. |
| 4 | ಮಲೇಶಿಯಾ ದೇಶದ ಕೋಲಾಲಂಪುರ ದಲ್ಲಿ ನಡೆಯುವ 16ನೇ ಏಷ್ಯನ್ ಹಿರಿಯರ ಅಥ್ಲೇಟಿಕ್ಸ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಭಾಗವಹಿಸಲು ಧನಸಹಾಯ ನೀಡುವ ಬಗ್ಗೆ. | ಶ್ರೀ ಹೆಚ್.ಎಸ್.ಬೀಮಯ್ಯ, ಹಾಸನ ಇವರು ಮನವಿಯನ್ನು ಸಲ್ಲಿಸಿ ದಿನಾಂಕ: 06-12-2010ರಿಂದ 12-12-2010ರವರೆಗೆ ಮಲೇಶಿಯಾ ದೇಶದ ಕೋಲಾಲಂಪುರದಲ್ಲಿ ನಡೆಯುವ 16ನೇ ಏಷ್ಯನ್ ಅಥ್ಲೇಟಿಕ್ಸ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಭಾರತದ ಹಿರಿಯರ ಅಥ್ಲೇಟಿಕ್ಸ್ ಸಂಸ್ಥೆಯಿಂದ ಆಯ್ಕೆಯಾಗಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ಧನಸಹಾಯವನ್ನು ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ದಿನಾಂಕ: 06-12-2010ರಿಂದ 12-12-2010ರವರೆಗೆ ಮಲೇಶಿಯಾ ದೇಶದ ಕೋಲಾಲಂಪುರದಲ್ಲಿ ನಡೆಯುವ 16ನೇ ಏಷ್ಯನ್ ಅಥ್ಲೇಟಿಕ್ಸ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಭಾರತದ ಹಿರಿಯರ ಅಥ್ಲೇಟಿಕ್ಸ್ ಸಂಸ್ಥೆಯಿಂದ ಆಯ್ಕೆಯಾಗಿರುವ ಶ್ರೀ ಹೆಚ್.ಎಸ್. ಭೀಮಯ್ಯ, ಹಾಸನ ಇವರಿಗೆ ಅಥ್ಲೇಟಿಕ್ಸ್ ಚಾಂಪಿಯನ್ ಶಿಪ್ ನಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/-(ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಸಲು ಸಭೆಯು ಸರ್ವಾನುಮತ ದಿಂದ ತೀರ್ಮಾನಿಸಿತು. |
| | | ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು | |

(ಶ್ರೀಮತಿ ಕಾಮಾಕ್ಷಿರಾಜು),
ಅಧ್ಯಕ್ಷರು,
ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ
ಸ್ಥಾಯಿ ಸಮಿತಿ, ಜಿಲ್ಲಾ ಪಂಚಾಯಿತಿ, ಹಾಸನ.